ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

2019-20ನೇ ಸಾಲಿನಲ್ಲಿ ಶಾಸಕರ ಪ್ರಾದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಬಗ್ಗೆ

ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) -

191 (1488) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) 2019-20ನೇ ಸಾಲಿನಲ್ಲಿ ಶಾಸಕರ ಪ್ರಾದೇಶಾಭಿವೃದ್ಧಿ ಯೋಜನೆಯಡಿ ಅನುದಾನ ನೀಡದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಿಗಧಿತ ಕಾಲದಲ್ಲಿ ಅನುದಾನ ಬಿಡುಗಡೆಯಾಗದೇ ಇರಲು ಕಾರಣವೇನು;

(ಇ) ಬಾಕಿ ಉಳಿದ ಮೂರು ಕಂತುಗಳ ಮೊತ್ತವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ;

(ಈ) ಈಗಾಗಲೇ 2019-20ನೇ ಸಾಲಿನಲ್ಲಿ ಅನುಮೋದನೆ ನೀಡಿದ ಕಾಮಗಾರಿಗಳಿಗೆ ಸರಿಯಾದ ಸಮಯದಲ್ಲಿ ಅನುದಾನ ಬಿಡುಗಡೆಯಾಗದೇ ಇರುವುದರಿಂದ ಮಾರ್ಗಸೂಚಿ ಕಂಡಿಕೆ 4 ಮತ್ತು ಕಂಡಿಕೆ 4.1ಕ್ಕೆ ತಿದ್ದುಪಡಿ ಮಾಡಲು ಚಿಂತನೆ ಮಾಡಲಾಗಿದೆಯೇ ?